ಅಂಚೆ ವಿಳಾಸ: ಯೂನಿರಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 14.12.2023

ಸಂಖ್ಯೆ:ಜಿಎಲ್5/98(2)/2022–23

## ಸುತ್ತೋಲೆ

ವಿಷಯ: ಅಧಿಕೃತ ಸಭೆ ಸಮಾರಂಭಗಳಲ್ಲಿ ವಿಭಾಗ/ಕಾಲೇಜು/ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆ (Single Use) ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ/ಸರಬರಾಜನ್ನು ನಿಷೇಧಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,(ವಿಶ್ವವಿದ್ಯಾಲಯಗಳು–2 ಮತ್ತು ಸಾಮಾನಯ–2), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ ಬೆಂಗಳೂರು ಇವರ ಪತ್ರ ಸಂಖ್ಯೆ:ಇಡಿ 21 ವಿವಿಧ 2023, ದಿನಾಂಕ:21.08.2023
2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ರಾಜಕೀಯ), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಿಆಸುಇ 105 ರಾಸ 2023, ದಿನಾಂಕ: 27.07.2023
3. ಸರ್ಕಾರಿ ಅಧಿಸೂಚನೆ ಸಂಖ್ಯೆ:ಅಪಜೀ 17 ಇಪಿಸಿ 2012, ದಿನಾಂಕ: 11.03.2016
4. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಆದೇಶ ಸಂಖ್ಯೆ:ಸಿಆಸುಇ 83 ರಾಸವಿ 2018, ದಿನಾಂಕ:05.09.2018
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ),ಬೆಂಗಳೂರು ಇವರ ಪತ್ರ ಸಂಖ್ಯೆ:ಇಡಿ 62 ವಿವಿಧ 2018 ದಿನಾಂಕ: 13.11.2018.
6. ಈ ಕಛೇರಿ ಸುತ್ತೋಲೆ ಸಂಖ್ಯೆ:ಜಿಎಲ್.5/66/2017–18, ದಿನಾಂಕ: 22.11.2018

*****

ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ನಿರ್ದೇಶಕರು/ಬಟವಾಡೆ ಅಧಿಕಾರಿಗಳು ಹಾಗೂ ಅಧೀನಕೊಳಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳು ಉಲ್ಲೇಖ(3)ರ ಅಧಿಸೂಚನೆ ಅನ್ವಯ ಪರಿಸರವನ್ನು ಸಂರಕ್ಷಿಸಲು ಹಾಗೂ ಸುಧಾರಿಸಲು ವಿಶ್ವವಿದ್ಯಾನಿಲಯವು ಸಭೆ–ಸಮಾರಂಭಗಳಲ್ಲಿ ಏಕ ಕಾಲಿಕ ಬಳಕೆ (Single Use Packed water bottles) ಪ್ಲಾಸ್ಟಿಕ್ ನೀರಿನ ಬಳಕೆ/ಸರಬರಾಜು ಮಾಡುವುದನ್ನು ನಿಷೇಧಿಸಿ ನೀರನ್ನು ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡಲು ಮತ್ತು ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು (Common drinking water dispensing system) ಏರ್ಪಡಿಸಲು ಅಗತ್ಯ ಕ್ರಮ ವಹಿಸುವಂತೆ ಉಲ್ಲೇಖ(4)ರ ಆದೇಶದಂತೆ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ತಿಳಿಸಲಾಗಿದೆ(ಪ್ರತಿ ಲಗತ್ತಿಸಿದೆ)

ಉಪ ಕುಲಸಚಿವ(ಸಾಮಾನ್ಯ)

ಇವರಿಗೆ:
1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು
2. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ, ಮೈಸೂರು
4. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು –ಸದರಿ ಪತ್ರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
5. ಮಾನ್ಯ ಕುಲಪತಿ /ಕುಲಸಚಿವ /ಕುಲಸಚಿವ (ಪರೀಕ್ಷಾಂಗ) /ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು

ಪ್ರತಿ:

6. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,(ವಿಶ್ವವಿದ್ಯಾಲಯಗಳು– ಮತ್ತು ಸಾಮಾನಯ–2), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು–560001
7. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ವತಿಯಿಂದ ಆಯೋಜಿಸಲ್ಪಡುವ ಅಧಿಕೃತ ಸಭೆ-ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆ (Single use) ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ/ಸರಬರಾಜನ್ನು ನಿಷೇಧಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಅಧಿಸೂಚನೆ ಸಂಖ್ಯೆ:ಅಪಜೀ 17 ಇಪಿಸಿ 2012, ದಿನಾಂಕ:11.03.2016.

ಪ್ರಸ್ತಾವನೆ:

ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್‌ಗಳು ಹಾಗೂ ದೈನಂದಿನ ಬಳಕೆಯಲ್ಲಿರುವ ಇತರೆ ಪ್ಲಾಸ್ಟಿಕ್ ವಸ್ತುಗಳು ಅಲ್ಪಾವಧಿ ಹಾಗೂ ದೀರ್ಘಾವಧಿಯಲ್ಲಿ ಪರಿಸರಕ್ಕೆ ಹಾನಿಯನ್ನು ಮತ್ತು ಆರೋಗ್ಯಕ್ಕೆ ಅಪಾಯವನ್ನು ಉಂಟುಮಾಡಲು ಕಾರಣವಾಗಿರುತ್ತವೆ. ಈ ಹಿನ್ನೆಯಲ್ಲಿ ಸರ್ಕಾರವು ಮೇಲೆ ಓದಲಾದ (1)ರ ಸರ್ಕಾರಿ ಅಧಿಸೂಚನೆಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯದ ನಿಯಂತ್ರಣಕ್ಕಾಗಿ ಈಗಾಗಲೇ ಪ್ಲಾಸ್ಟಿಕ್ ಕ್ಯಾರಿಬ್ಯಾಗ್, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ಲೋಟ, ಪ್ಲಾಸ್ಟಿಕ್ ಚಮಚ ಮತ್ತು ಊಟದ ಮೇಜಿನ ಮೇಲೆ ಹರಡುವ ಪ್ಲಾಸ್ಟಿಕ್ ಹಾಳೆಗಳು ಮತ್ತಿತರ ವಸ್ತುಗಳ ತಯಾರಿಕೆ, ಮಾರಾಟ, ದಾಸ್ತಾನು ಮತ್ತು ಉಪಯೋಗವನ್ನು ನಿಷೇಧಿಸಿ ಅಧಿಸೂಚನೆ ಹೊರಡಿಸಲಾಗಿದೆ. ಆದರೆ, ಈ ನಿಷೇಧವು ಸಾಮಗ್ರಿಗಳ ಪ್ಯಾಕೇಜಿಂಗ್ ಮಾಡುವ ಸಂದರ್ಭದಲ್ಲಿ ಅವಿಭಾಜ್ಯವಾಗಿ (Integral part of package) ಬರುವ ಪ್ಲಾಸ್ಟಿಕ್‌ಗಳನ್ನು ಹೊರತುಪಡಿಸಿರುವುದರಿಂದ ಏಕ ಕಾಲಿಕ ಬಳಕೆ ಪ್ಲಾಸ್ಟಿಕ್ ನೀರಿನ ಬಾಟಲಿಗಳಿಗೆ (Single use packaged water bottles) ಅನ್ವಯವಾಗುವುದಿಲ್ಲ.

ಇಂತಹ ಬಾಟಲ್‌ಗಳ ಮೇಲೆ ನಿರ್ಬಂಧವಿಲ್ಲದ್ದರಿಂದ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ನೀರಿನ ಬಾಟಲ್‌ಗಳ ಬಳಕೆ ಯಥೇಚ್ಛವಾಗಿದ್ದು, ಬಳಸಿದ ಪ್ಲಾಸ್ಟಿಕ್ ನೀರಿನ ಬಾಟಲುಗಳು ಎಲ್ಲೆಂದರಲ್ಲಿ ಎಸೆಯಲ್ಪಡುವುದರಿಂದ ಘನ ತ್ಯಾಜ್ಯದಲ್ಲಿ ಗಣನೀಯ ಪ್ರಮಾಣದಲ್ಲಿ ಸೇರಿ ಹಲವಾರು ಪರಿಸರಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಉಂಟು ಮಾಡುವುದರ ಜೊತೆಗೆ, ನಗರ ಪ್ರದೇಶಗಳಲ್ಲಿ ಅಹಿತಕರ ದೃಶ್ಯ ಸೃಷ್ಟಿಯಾಗುತ್ತಿರುತ್ತದೆ. ಇದಲ್ಲದೆ, ಸರ್ಕಾರದ ಸಭೆ-ಸಮಾರಂಭಗಳಲ್ಲಿ ಪ್ಲಾಸ್ಟಿಕ್ ಬಾಟಲಿಗಳಲ್ಲಿ ಸರಬರಾಜಾಗುವ ನೀರು ಹಲವಾರು ಸಂದರ್ಭಗಳಲ್ಲಿ ಅಲ್ಪ ಪ್ರಮಾಣದಲ್ಲಿ ಮಾತ್ರ ಬಳಕೆಯಾಗಿ ಹೆಚ್ಚಿನ ಪ್ರಮಾಣದ ನೀರು ವ್ಯರ್ಥವಾಗುತ್ತಿದೆ ಮತ್ತು ಇಂತಹ ನೀರಿನ ಬಾಟಲಿಗಳನ್ನು ಖರೀದಿಸುವುದರಿಂದ ರಾಜ್ಯದ ಬೊಕ್ಕಸಕ್ಕೆ ದುಬಾರಿ ಖರ್ಚು ಸಹ ಆಗುತ್ತಿರುತ್ತದೆ.

ಈ ಮೇಲ್ಕಂಡ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಹಾಗೂ ಸರ್ಕಾರಿ ಸ್ವಾಮ್ಯದ ಎಲ್ಲಾ ಸಂಸ್ಥೆಗಳಿಂದ ಆಯೋಜಿಸುವ ಸಭೆ-ಸಮಾರಂಭಗಳಲ್ಲಿ ಮತ್ತು ಸರ್ಕಾರಿ ಕಛೇರಿಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲಿಗಳಲ್ಲಿ (Single use packaged water bottles) ಪ್ಯಾಕ್ ಮಾಡಿದ ನೀರು ಸರಬರಾಜು/ಬಳಕೆ ಮಾಡುವುದನ್ನು ನಿಷೇಧಿಸಿ, ಉತ್ತಮ ಗುಣಮಟ್ಟದ ಕುಡಿಯುವ ನೀರನ್ನು ಪರಿಶುದ್ಧ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡುವುದನ್ನು ಉತ್ತೇಜಿಸುವುದು ಅಗತ್ಯವೆಂದು ತೀರ್ಮಾನಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ.

...2



Generated from eOffice by ...

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 83 ರಾಸವಿ 2018**
**ಬೆಂಗಳೂರು ದಿನಾಂಕ: 05.09.2018**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸರ್ಕಾರಿ ಹಾಗೂ ಸರ್ಕಾರಿ ಸ್ವಾಮ್ಯದ ಮಂಡಳಿ, ನಿಗಮ, ವಿಶ್ವವಿದ್ಯಾನಿಲಯಗಳು ಹಾಗೂ ಸರ್ಕಾರದಿಂದ ಅನುದಾನ ಪಡೆಯುವಂತಹ ಯಾವುದೇ ಸಂಸ್ಥೆಗಳ ವತಿಯಿಂದ ಏರ್ಪಡಿಸಲ್ಪಡುವ ಸಭೆ-ಸಮಾರಂಭಗಳಲ್ಲಿ ಏಕ ಕಾಲಿಕ ಬಳಕೆಯ ಪ್ಲಾಸ್ಟಿಕ್ ಬಾಟಲ್‌ನ (Single use packaged water bottles) ನೀರಿನ ಬಳಕೆ/ಸರಬರಾಜು ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಿಷೇಧಿಸಿದೆ. ಇಂತಹ ಸಭೆ-ಸಮಾರಂಭಗಳಲ್ಲಿ ಕುಡಿಯುವ ನೀರನ್ನು ಸಂದರ್ಭಾನುಸಾರ ಶುಚಿತ್ವ ರೀತಿಯಲ್ಲಿ ಗ್ಲಾಸ್, ಸ್ಟೀಲ್, ಪೇಪರ್ ಮತ್ತಿತರ ಪ್ಲಾಸ್ಟಿಕ್ ಅಲ್ಲದ ಲೋಟಗಳಲ್ಲಿ ಸರಬರಾಜು ಮಾಡಲು ಕ್ರಮ ವಹಿಸತಕ್ಕದ್ದು ಹಾಗೂ ಈ ಆದೇಶಕ್ಕೆ ಲಗತ್ತಿಸಿದ **ಅನುಬಂಧ-1** ರಲ್ಲಿರಿಸಿರುವಂತೆ ಸೂಕ್ತ ಸಾಮೂಹಿಕ ಕುಡಿಯುವ ನೀರು ವಿತರಣಾ ವ್ಯವಸ್ಥೆಯನ್ನು (Common drinking Water dispensing system) ಏರ್ಪಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ಎಸ್. ರೋಹಿಣಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ರಾಜಕೀಯ).

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರಿಗೆ ರವಾನಿಸುತ್ತಾ, ಈ ಆದೇಶವನ್ನು ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ, ಅದರ 100 ಪ್ರತಿಗಳನ್ನು ಇಲಾಖೆಗೆ ಕಳುಹಿಸಿಕೊಡಬೇಕೆಂದು ಕೋರಲಾಗಿದೆ.

ಪ್ರತಿ:

1) ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
2) ಎಲ್ಲಾ ಇಲಾಖಾ ಮುಖ್ಯಸ್ಥರು.
3) ಸರ್ಕಾರದ ಎಲ್ಲಾ ನಿಗಮ/ಮಂಡಳಿಗಳ ಅಧ್ಯಕ್ಷರು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ವ್ಯವಸ್ಥಾಪಕ ನಿರ್ದೇಶಕರು ಹಾಗೂ ವಿಶ್ವವಿದ್ಯಾನಿಲಯಗಳ ಕುಲಪತಿಗಳು.
4) ಎಲ್ಲಾ ಜಿಲ್ಲಾಧಿಕಾರಿಗಳು.
5) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6) ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳು.
7) ಶಾಖಾ ರಕ್ಷಾ ಕಡತ.

Issued ... Dated 6/9/18
D.P.A.R. [illegible]



Generated from eOffice by [illegible]